**All India Radio : Bangalore**

**Pradesha Samachara – Kannada**

**26.04.2018/14.30hrs**

ಆಕಾಶವಾಣಿ : ಬೆಂಗಳೂರು

ಪ್ರದೇಶ ಸಮಾಚಾರ

ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಆದ್ಯತೆ ಅಂಶವೇ ಚುನಾವಣಾ ಪ್ರಚಾರದಲ್ಲಿ ಬಿಜೆಪಿಯ ಮೂಲ ಮಂತ್ರವಾಗಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಮೇ ೧೨ರಂದು ರಾಜ್ಯ ವಿಧಾನಸಭಾ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಕರ್ನಾಟಕದ ಎಲ್ಲಾ ೨೨೪ ಕ್ಷೇತ್ರಗಳ ಅಭ್ಯರ್ಥಿಗಳು, ಸಂಸದರು ಹಾಗೂ ಶಾಸಕರೊಂದಿಗೆ ನಮೋ ಆಪ್ ಮೂಲಕ ಸಂವಾದ ನಡೆಸಿದರು. ಕರ್ನಾಟಕ ಸೇರಿದಂತೆ ದೇಶದ ಸಮಗ್ರ ಅಭಿವೃದ್ಧಿಗೆ ಬಿಜೆಪಿ ಹಲವು ಕಾರ್ಯಕ್ರಮಗಳನ್ನು ರೂಪಿಸಿದೆ. ಇವುಗಳ ಈಡೇರಿಕೆಗೆ ಕರ್ನಾಟಕದಲ್ಲಿ ಉತ್ತೇಜನ ನೀಡುವ ಅಗತ್ಯವಿದೆ. ರಾಜ್ಯದ ಅಭಿವೃದ್ಧಿಗೆ ಮೂರು ಸೂತ್ರಗಳನ್ನು ರೂಪಿಸಲಾಗಿದ್ದು, ಬಿಜೆಪಿ ಎಲ್ಲೆಡೆ ಅಭಿವೃದ್ಧಿಗೆ ಆದ್ಯತೆ ನೀಡಿದೆ ಎಂದು ಅವರು ಹೇಳಿದ್ದಾರೆ. ವಿಪಕ್ಷಗಳು ಅಭಿವೃದ್ಧಿ ಬಗ್ಗೆ ಚರ್ಚೆ ಮಾಡದೆ ಕೇವಲ ಜಾತಿ ಆಧಾರದ ಮೇಲೆ ಚರ್ಚೆ ನಡೆಸುತ್ತಿವೆ. ಕಾಂಗ್ರೆಸ್ ಸುಳ್ಳು ಭರವಸೆಗಳನ್ನು ನೀಡಿ ಜನರ ಹಾದಿ ತಪ್ಪಿಸುತ್ತಿದೆ. ಆದರೆ ಬಿಜೆಪಿ ಕೊಟ್ಟ ಭರವಸೆಗಳನ್ನು ಈಡೇರಿಸುತ್ತಿದ್ದು, ಕೇವಲ ಅಭಿವೃದ್ಧಿಯೇ ಪಕ್ಷದ ಮೂಲಮಂತ್ರವಾಗಿದೆ ಎಂದು ಪ್ರಧಾನಿ ಪ್ರತಿಪಾದಿಸಿದರು. ಕರ್ನಾಟಕದಲ್ಲಿ ಪ್ರಚಾರ ಬಿರುಸುಗೊಳಿಸುವಂತೆ ಸೂಚಿಸಿದ ಅವರು, ಅಭಿವೃದ್ಧಿಯ ಮಂತ್ರದಿಂದಲೇ ಕರ್ನಾಟಕದಲ್ಲಿ ಬಿಜೆಪಿ ಗೆಲುವು ಬಯಸುತ್ತಿದೆಯೇ ವಿನಃ ಜನರನ್ನು ದಾರಿ ತಪ್ಪಿಸುವ ಮೂಲಕ ಗೆಲುವು ಸಾಧಿಸುವುದು ಪಕ್ಷದ ಉದ್ದೇಶವಲ್ಲ ಎಂದು ಸ್ಪಷ್ಟಪಡಿಸಿದರು. ಧರ್ಮ, ಜಾತಿ ಮತ್ತಿತರ ವಿಷಯಗಳನ್ನು ಮುಂದಿಟ್ಟುಕೊಂಡು ರಾಜಕೀಯ ಮಾಡುವವರು ಅಭಿವೃದ್ಧಿ ರಾಜಕೀಯದ ಮುಂದೆ ಏನನ್ನೂ ಮಾಡಲಾಗದು, ಕಾಂಗ್ರೆಸ್ ಸಂಸ್ಕೃತಿಯಿಂದ ದೇಶದ ರಾಜಕಾರಣದ ಮುಖ್ಯವಾಹಿನಿಯ ಸಂಸ್ಕೃತಿಯೇ ಹಾಳಾಗಿದೆ. ಹಾಗಾಗಿ ಈಗ ತುರ್ತಾಗಿ ಕಾಂಗ್ರೆಸ್ ಸಂಸ್ಕೃತಿಯನ್ನು ತೊಡೆದು ಹಾಕಬೇಕಾಗಿದೆ ಎಂದರು. ವಿಧಾನಸಭಾ ಚುನಾವಣಾ ಪ್ರಚಾರದಲ್ಲಿ ಮಹಿಳಾ ಕಾರ್ಯಕರ್ತರನ್ನು ಹೆಚ್ಚಾಗಿ ತೊಡಗಿಸಬೇಕು- ಕರ್ನಾಟಕದ ಜನತೆ ಬಹುಮತದ ಸರ್ಕಾರ ರಚನೆಗೆ ಮುಂದಾಗಬೇಕು- ಅತಂತ್ರ ವಿಧಾನಸಭೆ ರಚನೆಯಾಗಲಿದೆ ಎಂದು ಕೆಲವರು ಅಪಪ್ರಚಾರ ಮಾಡುತ್ತಿದ್ದು, ಅದಕ್ಕೆ ರಾಜ್ಯದ ಮತದಾರರು ಅವಕಾಶ ನೀಡಬಾರದು ಎಂದು ನರೇಂದ್ರ ಮೋದಿ

ಮನವಿ ಮಾಡಿದರು. ತಮ್ಮ ಚೀನಾ ಪ್ರವಾಸದ ನಂತರ ತಾವು ಕರ್ನಾಟಕಕ್ಕೆ ಭೇಟಿ ನೀಡಲಿದ್ದು, ಪ್ರಚಾರ ಕಾರ್ಯಕ್ಕೆ ಕೈಜೋಡಿಸುವುದಾಗಿ ನರೇಂದ್ರ ಮೋದಿ ತಿಳಿಸಿದರು.

***************

ಚಾಮುಂಡೇಶ್ವರಿ ಮತ್ತು ಬದಾಮಿ ಮತಕ್ಷೇತ್ರಗಳಲ್ಲಿ ಹಣಬಲ ಮತ್ತು ಜಾತಿಬಲ ರಾಜಕಾರಣದ ನೆರವಿನಿಂದ ಗೆಲುವು ಗಳಿಸುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತಂತ್ರ ಯಶಸ್ವಿಯಾಗುವುದಿಲ್ಲ ಎಂದು ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ. ಮೈಸೂರಿನಲ್ಲಿಂದು ಮಾತನಾಡಿದ ಅವರು, ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸೋಲುವ ಆತಂಕದಿಂದಲೇ ಮುಖ್ಯಮಂತ್ರಿ ಬದಾಮಿಯಲ್ಲೂ ಕಣಕ್ಕಿಳಿದಿದ್ದು, ಜಾತಿ ರಾಜಕಾರಣ ಮಾಡುತ್ತಿರುವ ಅವರು, ಬಿ.ಎಸ್. ಯಡಿಯೂರಪ್ಪ ಅವರ ಪುತ್ರನಿಗೆ ಟಿಕೆಟ್ ಸಿಗದಂತೆ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ. ಇದು ಬಿಜೆಪಿ ಮತ್ತು ಕಾಂಗ್ರೆಸ್ ನಡುವಣ ಒಳ ಒಪ್ಪಂದವನ್ನು ಸ್ಪಷ್ಟಪಡಿಸಿದ್ದು, ವರುಣಾ ಕ್ಷೇತ್ರದಲ್ಲಿ ಜೆಡಿಎಸ್ ಗೆಲುವಿಗೆ ನೆರವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಬದಾಮಿ ಮತಕ್ಷೇತ್ರದಲ್ಲಿ ಸಿದ್ದರಾಮಯ್ಯ ಮತ್ತು ಬಿಜೆಪಿ ಅಭ್ಯರ್ಥಿ ಶ್ರೀರಾಮುಲು ಇಬ್ಬರೂ ಹೊರಗಿನವರಾಗಿದ್ದು, ಸ್ಥಳೀಯರಾದ ಜೆಡಿಎಸ್ ಅಭ್ಯರ್ಥಿಗೆ ಗೆಲುವು ನಿಶ್ಚಿತ ಎಂದು ಕುಮಾರಸ್ವಾಮಿ ಹೇಳಿದರು.

***************

ಕಾಂಗ್ರೆಸ್ ಅಧ್ಯಕ್ಷ ರಾಹುಲ್ ಗಾಂಧಿ ರಾಜ್ಯ ವಿಧಾನಸಭಾ ಚುನಾವಣೆಗೆ ತಮ್ಮ ಏಳನೇ ಹಂತದ ಪ್ರಚಾರ ಆರಂಭಿಸಲು ಇಂದು ಬೆಳಗ್ಗೆ ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಲುಪಿದ್ದಾರೆ. ಇಂದು ಮುಂಜಾನೆ ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ರಾಜ್ಯಾಧ್ಯಕ್ಷ ಡಾ. ಜಿ. ಪರಮೇಶ್ವರ್, ಲೋಕಸಭೆಯಲ್ಲಿ ಕಾಂಗ್ರೆಸ್ ನಾಯಕ ಮಲ್ಲಿಕಾರ್ಜುನ ಖರ್ಗೆ, ಸಚಿವರಾದ ಡಿ.ಕೆ. ಶಿವಕುಮಾರ್, ಎಚ್.ಕೆ. ಪಾಟೀಲ್ ಬರಮಾಡಿಕೊಂಡರು. ಎರಡು ದಿನಗಳ ರಾಜ್ಯ ಪ್ರವಾಸದ ವೇಳೆ ಅವರು ಅಂಕೋಲಾ, ಕುಮಟಾದಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಮಾಸ್ತಿ ಕಟ್ಟೆ ಸರ್ಕಲ್, ಗಿಬ್ಬ ಶಾಲೆ ಸರ್ಕಲ್‌ಗಳಲ್ಲಿ ರೋಡ್ ಶೋ ನಡೆಸಿ, ಭಟ್ಕಳದಲ್ಲಿ ಸಭೆ ನಡೆಸಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ನಾಳೆ ಮಂಗಳೂರು, ಧರ್ಮಸ್ಥಳ, ಗೋಣಿಕೊಪ್ಪ ಮತ್ತು ಪಿರಿಯಾಪಟ್ಟಣದಲ್ಲಿ ರಾಹುಲ್ ಗಾಂಧಿ ಚುನಾವಣಾ ಪ್ರಚಾರ ನಡೆಸಲಿದ್ದು, ಮಂಗಳೂರಿನಲ್ಲಿ ನಾಳೆ ಪಕ್ಷದ ಪ್ರಣಾಳಿಕೆ ಬಿಡುಗಡೆ ಮಾಡುವ ಸಾಧ್ಯತೆ ಇರುವುದಾಗಿ ಸುದ್ದಿಸಂಸ್ಥೆ ವರದಿ ಮಾಡಿದೆ.

***************

ರಾಜ್ಯ ವಿಧಾನಸಭಾ ಚುನಾವಣಾ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಬಿಜೆಪಿ ಒತ್ತಡದಿಂದಾಗಿಯೇ ಎಲ್ಲಾ ಪಕ್ಷಗಳ ಸಭೆ ಕರೆದು, ಕುಂದುಕೊರತೆ ಆಲಿಸುವಂತಾಯಿತು ಎಂದು ಕೇಂದ್ರ ಸಚಿವ ಪ್ರಕಾಶ್ ಜಾವಡೇಕರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿನ್ನೆಯಿಂದ ಆರಂಭವಾಗಿರುವ ನಮ್ಮ ಮನೆ ಬಿಜೆಪಿ ಮನೆ ಅಭಿಯಾನ ಮುಂದುವರಿಯಲಿದೆ. ಇಂದು ಬೆಳಗ್ಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಪಕ್ಷದ ಅಭ್ಯರ್ಥಿಗಳು ಮತ್ತು ಕಾರ್ಯಕರ್ತರನ್ನು ಉದ್ದೇಶಿಸಿ ನಡೆಸಿದ ಸಂವಾದ ಉತ್ತೇಜನಕಾರಿಯಾಗಿತ್ತು. ದೇಶದ ಚುನಾವಣಾ ಇತಿಹಾಸದಲ್ಲೇ ಮೊದಲ ಬಾರಿಗೆ ಪ್ರಧಾನಮಂತ್ರಿಯೊಬ್ಬರು ಬೂತ್ ಮಟ್ಟದ ಪ್ರಮುಖರೊಂದಿಗೆ ಚುನಾವಣಾ ಕಾರ್ಯತಂತ್ರ ಕುರಿತಂತೆ ಮಾತನಾಡಿರುವುದರಿಂದ ಪಕ್ಷಕ್ಕೆ ಹೆಚ್ಚಿನ ಬಲ ಬಂದಿದೆ ಎಂದರು.

***************

ಮೇ ೧೨ರಂದು ರಾಜ್ಯ ವಿಧಾನಸಭಾ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಮೇ ೧೧ ಮತ್ತು ೧೨ರಂದು ರಾಜ್ಯದ ಎಲ್ಲ ಪದವಿ ಪೂರ್ವ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಚುನಾವಣೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಉಪನ್ಯಾಸಕರು ಭಾಗವಹಿಸುತ್ತಿದ್ದು, ಪದವಿಪೂರ್ವ ಕಾಲೇಜುಗಳಲ್ಲಿ ಮತಗಟ್ಟೆಗಳನ್ನು ವ್ಯವಸ್ಥೆ ಮಾಡುತ್ತಿರುವ ಹಿನ್ನೆಲೆಯಲ್ಲಿ ರಜೆ ಘೋಷಿಸಿ, ಆದೇಶ ಹೊರಡಿಸಲಾಗಿದೆ.

***************

ವಿಧಾನಸಭಾ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಮತದಾರರ ಜಾಗೃತಿ ಕಾರ್ಯಕ್ರಮಗಳು ಚುರುಕುಗೊಂಡಿವೆ. ದೊಡ್ಡಬಳ್ಳಾಪುರದಲ್ಲಿ ಸ್ವೀಪ್ ಸಮಿತಿ ಮತ್ತು ನಗರಸಭೆ ವತಿಯಿಂದ ಮತದಾನದ ಅರಿವು ಮೂಡಿಸುವ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಪೌರ ಕಾರ್ಮಿಕರು ಮತ್ತು ನಗರಸಭೆ ಸಿಬ್ಬಂದಿ ಪಾಲ್ಗೊಂಡರು. ಬಳ್ಳಾರಿಯಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಗುಂಡಮುಳಗು ಗ್ರಾಮದ ದಿವ್ಯಾಂಗ ಶಿಕ್ಷಕಿ ಎನ್. ಲಕ್ಷ್ಮೀದೇವಿ ಅವರನ್ನು ಚುನಾವಣಾ ಆಯೋಗದ ರಾಯಭಾರಿ ಎಂದು ಘೋಷಿಸಲಾಯಿತು. ದಿವ್ಯಾಂಗರು ಮತದಾನ ಪ್ರಕ್ರಿಯೆಯಲ್ಲಿ ಆಸಕ್ತಿಯಿಂದ ಪಾಲ್ಗೊಳ್ಳಬೇಕೆಂದು ಲಕ್ಷ್ಮೀದೇವಿ ಮನವಿ ಮಾಡಿದರು. ನಂತರ ನಡೆದ ಜಾಥಾದಲ್ಲಿ ಸರ್ಕಾರಿ ನೌಕರರು, ಅಂಗನವಾಡಿ ಕಾರ್ಯಕರ್ತೆಯರು ನೂರಾರು ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಗದಗ್ ಜಿಲ್ಲೆಯ ಶಿರಹಟ್ಟಿ ಗದಗ್

ರೋಣಾ ಮತ್ತು ನರಗುಂದ ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಜಾಗೃತಿ ಕಾರ್ಯಕ್ರಮ ನಡೆಯಿತು.

***************

ಹೆಗ್ಗಡದೇವನ ಕೋಟೆ ತಾಲೂಕು ಗೊರೂರು ಗ್ರಾಮದಲ್ಲಿ ಕಬಿನಿ ಜಲಾಶಯದ ಹಿನ್ನೀರಿನಲ್ಲಿ ಇಂದು ಒಂದೇ ಕುಟುಂಬದ ಮೂವರು ಮುಳುಗಿರುವ ಘಟನೆ ವರದಿಯಾಗಿದೆ. ನೀರಿನಲ್ಲಿ ಈಜುತ್ತಿದ್ದ ಮಗಳು ಮುಳುಗಿದಾಗ ಅವಳನ್ನು ರಕ್ಷಿಸಲು ತಂದೆ ಮತ್ತು ಸಹೋದರ ಧಾವಿಸಿದ್ದು, ಅವರೂ ನೀರು ಪಾಲಾದರೆಂದು ವರದಿ ತಿಳಿಸಿದೆ. ಪುಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**************

**ವಿಧಾನಸಭಾ ಚುನಾವಣೆ ಕುರಿತ ಧ್ವನಿಮುದ್ರಿತ ವಿಶೇಷ ಮಾಹಿತಿ ಸಂಚಿಕೆ ಈಗ ಪ್ರಸಾರ(ಅವಧಿ ೫ ನಿಮಿಷ)**

*******END********